# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಸರ್ಕಾರಿ ಆಶ್ರಮ ಶಾಲೆಗಳ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಮತ್ತು ಕಾಲೇಜುಗಳ ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಖಾಸಗಿ ಅನುದಾನಿತ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 682 ಬಿಎಂಎಸ್ 2018, ದಿನಾಂಕ: 27.09.2018.
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 586 ಬಿಎಂಎಸ್ 2018, ದಿನಾಂಕ:07.04.2018.
3. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 578 ಬಿಎಂಎಸ್ 2021, ದಿನಾಂಕ:30.11.2021.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕಕಡತ ಸಂಖ್ಯೆ: ಹಿಂವಕಇ/ವನಿಶಾ-2/ಸಿಆರ್-01/2022-23.
5. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ:ಆಇ 01 ವೆಚ್ಚ-3/2022, ದಿನಾಂಕ:05.04.2022.
6. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 235 ವೆಚ್ಚ-3/2022, ದಿನಾಂಕ:08.04.2022

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಸರ್ಕಾರಿ ಆಶ್ರಮ ಶಾಲೆಗಳ, ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜುಗಳ ಹಾಗೂ ಖಾಸಗಿ ಅನುದಾನಿತ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು ಪರಿಷ್ಕರಿಸಿ ಆದೇಶಿಸಲಾಗಿದೆ.

2022-23 ರ ಅಯವ್ಯಯ ಭಾಷಣದ ಕಂಡಿಕೆ-155 ರಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಲಾಗಿರುತ್ತದೆ:

**"ವಿದ್ಯಾರ್ಥಿನಿಲಯಗಳಲ್ಲಿ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಲು ಮಾಸಿಕ ಭೋಜನ ವೆಚ್ಚವನ್ನು 150 ರೂ.ಗಳಷ್ಟು ಹೆಚ್ಚಿಸಲು ರೂ.107ಕೋಟಿ ಹೆಚ್ಚುವರಿ ಅನುದಾನ ಒದಗಿಸಲಾಗುವುದು".**

ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ, ಆಶ್ರಮ ಶಾಲೆಗಳಿಗೆ ಆಹಾರ ಸಾಮಾಗ್ರಿಗಳನ್ನು ಸರಬರಾಜು ಮಾಡುವ ವ್ಯವಸ್ಥೆಯನ್ನು ವಿವರಿಸಲಾಗಿದೆ.

----2

26/4/2022

ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಹಿಂದುಳದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ, ಪಾರದರ್ಶಕವಾಗಿ ವಿದ್ಯಾರ್ಥಿನಿಲಯ ನಿರ್ವಹಣೆಗಾಗಿ ಹಾಗೂ ಸರ್ಕಾರವು ವಿದ್ಯಾರ್ಥಿನಿಲಯಗಳ ಆಶ್ರಮ ಶಾಲೆಗಳ, ವಸತಿ ಶಾಲೆಗಳ ಮತ್ತು ಕಾಲೇಜುಗಳ ನಿರ್ವಹಣೆಗಾಗಿ ಬಿಡುಗಡೆಗೊಳಿಸುತ್ತಿರುವ ಅನುದಾನವು ಸದ್ಬಳಕೆಯಾಗಲು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪಾಲಿಸಬೇಕಾದ ಹಲವು ಅಗತ್ಯ ಕ್ರಮಗಳನ್ನು ತಿಳಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (4) ರಲ್ಲಿ 2022-23ರ ಆಯವ್ಯಯದ ಭಾಷಣ ಕಂಡಿಕೆ-155 ರ ಘೋಷಣೆಯ ಹಿನ್ನೆಲೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಯವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಸರ್ಕಾರಿ ಆಶ್ರಮ ಶಾಲೆಗಳ, ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಮೊರಾರ್ಜಿ ದೇಸಾಯಿ ವಸತಿಶಾಲೆ ಮತ್ತು ಕಾಲೇಜುಗಳ ಹಾಗೂ ಖಾಸಗಿ ಅನುದಾನಿತ ಅನಾಥಾಲಯಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನಾ ವೆಚ್ಚದ ದರಗಳನ್ನು 2022-23ನೇ ಸಾಲಿನ ಜೂನ್ ಮಾಹೆಯಿಂದ ಅನ್ವಯವಾಗುವಂತೆ ಈ ಕೆಳಗಿನಂತೆ ಹೆಚ್ಚಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

(ರೂ.ಗಳಲ್ಲಿ)

| ಕ್ರ. ಸಂ. | ಸಂಸ್ಥೆಗಳ ವಿವರ | ಪ್ರತಿ ವಿದ್ಯಾರ್ಥಿಗೆ ಹಾಲಿ ನೀಡುತ್ತಿರುವ ಮಾಸಿಕ ಭೋಜನಾ ವೆಚ್ಚ | ಪ್ರತಿ ವಿದ್ಯಾರ್ಥಿಗೆ ಪರಿಷ್ಕರಿಸಿ, ರೂ.150/- ರಂತೆ ಹೆಚ್ಚಿಸಬೇಕಾಗಿರುವ ಮಾಸಿಕ ಭೋಜನಾ ವೆಚ್ಚ |
|---|---|---|---|
| 1 | ಸರ್ಕಾರಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | 1500/- | 1650/- |
| 2 | ಸರ್ಕಾರಿ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ | 1600/- | 1750/- |
| 3 | ಸರ್ಕಾರಿ ಆಶ್ರಮ ಶಾಲೆಗಳ ವಿದ್ಯಾರ್ಥಿಗಳಿಗೆ | 1200/- | 1350/- |
| 4 | ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 1000/- | 1150/- |
| 5 | ಖಾಸಗಿ ಅನುದಾನಿತ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | 1100/- | 1250/- |
| 6 | ಖಾಸಗಿ ಅನಾಥಾಲಯಗಳ ವಿದ್ಯಾರ್ಥಿಗಳಿಗೆ | 800/- | 950/- |

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಸಂಸ್ಥೆಗಳ ವಿವರ | ಮಂಜೂರಾತಿ ಸಂಖ್ಯೆ | ಪ್ರತಿ ವಿದ್ಯಾರ್ಥಿಗೆ ರೂ.150/- ರಂತೆ ಭೋಜನಾ ವೆಚ್ಚವನ್ನು ಹೆಚ್ಚಿಸಿದ್ದಲ್ಲಿ 10 ತಿಂಗಳಿಗೆ ಅವಶ್ಯವಿರುವ ಹೆಚ್ಚುವರಿ ಅನುದಾನ |
|---|---|---|---|
| 1 | ಸರ್ಕಾರಿ ಮೆಟ್ರಿಕ್-ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | 69956 | 1049.34 |
| 2 | ಸರ್ಕಾರಿ ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ | 127780 | 1916.70 |

---3

26/4/22